# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 31–01–2017 ರಂದು ಬೆಳಿಗ್ಗೆ 12.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಕಾರ್ಯಪಾಲಕ ಅಭಿಯಂತರರು |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | (ಕೇಂದ್ರ–ಯೋಜನೆ) |
| 3. | ಎನ್.ಉಮಾ | – ಸದಸ್ಯರು | ಎ.ಓ.(ಯೋಜನೆ–ಕೇಂದ್ರ) |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | ಎ.ಸಿ.ಆಡಿಟ್ ಸೆಲ್ |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | ಎಲ್ಲಾ ವಲಯ ಕಾ.ಪಾ.ಅ.(ಯೋಜನೆ) |
| 6. | ವಿ.ಸುರೇಶ್ | – ಸದಸ್ಯರು | |
| 7. | ಹೆಚ್.ಕುಸುಮಾ | – ಸದಸ್ಯರು | |
| 8. | ಎಂ.ಮಾಲತಿ | – ಸದಸ್ಯರು | |
| 9. | ಎಂ.ಶಾಮಲ | – ಸದಸ್ಯರು | |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಲೆಕ್ಕ ಪತ್ರ ಸ್ಥಾಯಿ ಸಮಿತಿಯ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ (ಯೋಜನೆ–ಕೇಂದ್ರ) ಹಾಗೂ ಎಲ್ಲಾ ವಲಯ ಯೋಜನೆ ವಿಭಾಗಗಳಿಗೆ ಸಂಬಂಧಿಸಿದ ಕಾರ್ಯಪಾಲಕ ಅಭಿಯಂತರರುಗಳನ್ನು ಸ್ವಾಗತ್ತಿಸುತ್ತಾ, ತಮ್ಮ ತಮ್ಮ ಪರಿಚಯ ಮಾಡಿಕೊಳ್ಳಲು ಕೋರಿದರು. ತತ್ಸಂಬಂಧವಾಗಿ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಯೋಜನೆ ವಿಭಾಗಗಳ ಕಾರ್ಯಪಾಲಕ ಅಭಿಯಂತರರುಗಳು ತಮ್ಮ ತಮ್ಮ ಪರಿಚಯವನ್ನು ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ, ಹಾಜರಿದ್ದ ಯೋಜನೆ ವಿಭಾಗಗಳ ಕಾರ್ಯಪಾಲಕ ಅಭಿಯಂತರರುಗಳಿಗೆ ತಮ್ಮ ತಮ್ಮ ಕಛೇರಿಗಳಿಗೆ ಸಂಬಂಧಿಸಿದಂತೆ 2006–07ನೇ ಸಾಲಿನಿಂದ 2013–14ನೇ ಸಾಲಿನವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಹಾಗೂ ಸದರಿ ಸಾಲುಗಳಿಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ

ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ವಿವರವಾದ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ಅದರಂತೆ ಹಾಜರಿದ್ದ ಎಲ್ಲಾ ವಲಯದ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರುಗಳು ಮುಖ್ಯ ಅಭಿಯಂತರರು (ಯೋಜನೆ–ಕೇಂದ್ರ) ಮತ್ತು ಆಡಿಟ್ ಅಧಿಕಾರಿ (ಯೋಜನೆ) ಕಛೇರಿಯಲ್ಲಿ ಯೋಜನೆ ವಿಭಾಗದ ಎಲ್ಲಾ ಬಿಲ್ಲುಗಳನ್ನು ಗುತ್ತಿಗೆದಾರರುಗಳಿಗೆ ಪಾವತಿಸಲಾಗುತ್ತದೆಂದು, ಸದರಿ ಕಛೇರಿಯಲ್ಲೇ ಲೆಕ್ಕಪತ್ರಗಳನ್ನು ನಿರ್ವಹಣೆ ಮಾಡುತ್ತಿರುವುದಾಗಿ ತಿಳಿಸುತ್ತಾ ಮುಖ್ಯ ಅಭಿಯಂತರರು (ಯೋಜನೆ–ಕೇಂದ್ರ) ರವರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವುದಾಗಿ ತಿಳಿಸಿದರು.

ನಂತರ ಅಧ್ಯಕ್ಷರು ಮಾತನಾಡುತ್ತಾ ಯೋಜನಾ ವಿಭಾಗ ವತಿಯಿಂದ ನಿರ್ವಹಿಸಲಾಗುತ್ತಿರುವ ಕಾಮಗಾರಿಗಳ ವಿವರಗಳನ್ನು ಸಲ್ಲಿಸಲು ಸೂಚಿಸಿದಾಗ, ವಲಯ ಮಟ್ಟದಲ್ಲಿ ಯೋಜನೆ ವಿಭಾಗದಿಂದ ಉದ್ಯಾನವನಗಳು, ಆಟದ ಮೈದಾನಗಳು, ಬಸ್ ಶೆಲ್ಟರ್, ರಸ್ತೆ ಹಾಗೂ ಚರಂಡಿ ಕಾಮಗಾರಿಗಳನ್ನು ನಿರ್ವಹಿಸುವುದಾಗಿ, ಕೇಂದ್ರ–ಯೋಜನೆ ವಿಭಾಗದಿಂದ ಅಂಡರ್‌ಪಾಸ್‌ಗಳು, ಫ್ಲೈ ಓವರ್‌ಗಳ ಕಾಮಗಾರಿಗಳನ್ನು ನಿರ್ವಹಿಸುವುದಾಗಿ ತಿಳಿಸಿದರು.

ತದನಂತರ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ಮಾತನಾಡುತ್ತಾ ವಲಯ ಮಟ್ಟದಲ್ಲಿ ಯೋಜನೆ ವಿಭಾಗದಿಂದ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳ ಸಂಪೂರ್ಣ ವಿವರಗಳನ್ನು, ಪಾವತಿಗೆ ಬಾಕಿ ಇರುವ ಬಿಲ್‌ಗಳ ವಿವರ, ಮೂರು ಕೋಟಿಗೂ ಮೇಲ್ಪಟ್ಟು ವೆಚ್ಚದಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಹಾಗೂ ಮುಖ್ಯ ಅಭಿಯಂತರರು (ಯೋಜನೆ–ಕೇಂಧ್ರ) ವಿಭಾಗದಿಂದ ಕೈಗೊಳ್ಳಲಾಗುತ್ತಿರುವ ಎಲ್ಲಾ ಕಾಮಗಾರಿಗಳ ವಿವರಗಳನ್ನು ಅಂದಾಜುಪಟ್ಟಿಗಳೊಂದಿಗೆ ಸಮಿತಿಗೆ ಸಲ್ಲಿಸಲು ಸೂಚಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಒಂದು ವಾರದ ಒಳಗೆ ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಸಮಿತಿಯು ತಮ್ಮ ಕಛೇರಿಗೆ ಭೇಟಿ ನೀಡಿ ತಪಾಸಣೆ ಕೈಗೊಳ್ಳುವ

ಸಂದರ್ಭದಲ್ಲಿ ಯಾವುದೇ ರೀತಿಯ ಲೋಪ ದೋಷಗಳು ಇಲ್ಲದಂತೆ ಎಲ್ಲಾ ಕಡತಗಳನ್ನು ನಿರ್ವಹಿಸಿರಲು ಸೂಚಿಸುತ್ತಾ ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಿದರು.

**ಅಧ್ಯಕ್ಷರು**
**ಲೆಕ್ಕಪತ್ರ ಸ್ಥಾಯಿ ಸಮಿತಿ**

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.

2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.

3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.

5.ಮುಖ್ಯ ಲೆಕ್ಕಾಧಿಕಾರಿಯವರಿಗೆ ಮಾಹಿತಿಗಾಗಿ ಕಳುಹಿಸಿದೆ

6.ಮುಖ್ಯ ಅಭಿಯಂತರರು (ಯೋಜನೆ-ಕೇಂದ್ರ) ರವರಿಗೆ ಕಳುಹಿಸುತ್ತಾ ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ

7.ಎಲ್ಲಾ ವಲಯ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರುಗಳಿಗೆ ಕಳುಹಿಸುತ್ತಾ ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ.

8.ಕಛೇರಿ ಕಡತಕ್ಕೆ

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 31-01-2017 ರಂದು ಬೆಳಿಗ್ಗೆ 11.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಎಲ್ಲಾ ವಲಯ ಸಹಾಯಕ ನಿರ್ದೇಶಕರು (ನಗರ ಯೋಜನೆ) |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | |
| 3. | ಎನ್.ಉಮಾ | – ಸದಸ್ಯರು | ಎ.ಸಿ. ಆಡಿಟ್ ಸೆಲ್ |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | |
| 6. | ವಿ.ಸುರೇಶ್ | – ಸದಸ್ಯರು | |
| 7. | ಹೆಚ್.ಕುಸುಮಾ | – ಸದಸ್ಯರು | |
| 8. | ಎಂ.ಮಾಲತಿ | – ಸದಸ್ಯರು | |
| 9. | ಎಂ.ಶಾಮಲ | – ಸದಸ್ಯರು | |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಲೆಕ್ಕ ಪತ್ರ ಸ್ಥಾಯಿ ಸಮಿತಿಯ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಎಲ್ಲಾ ವಲಯದ ಸಹಾಯಕ ನಿರ್ದೇಶಕರು (ನಗರ ಯೋಜನೆ) ರವರನ್ನು ಸ್ವಾಗತ್ತಿಸುತ್ತಾ, ತಮ್ಮ ತಮ್ಮ ಪರಿಚಯ ಮಾಡಿಕೊಳ್ಳಲು ಕೋರಿದರು. ತತ್ಸಂಬಂಧವಾಗಿ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಸಹಾಯಕ ನಿರ್ದೇಶಕರು (ನಗರ ಯೋಜನೆ) ರವರುಗಳು ತಮ್ಮ ತಮ್ಮ ಪರಿಚಯವನ್ನು ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ, ಹಾಜರಿದ್ದ ಎಲ್ಲಾ ವಲಯದ ಸಹಾಯಕ ನಿರ್ದೇಶಕರು (ನಗರ ಯೋಜನೆ)ರವರುಗಳಿಗೆ ತಮ್ಮ ತಮ್ಮ ಕಛೇರಿಗಳಿಗೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ 2013-14ನೇ ಸಾಲಿನವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಹಾಗೂ ಸದರಿ ಸಾಲುಗಳಿಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ

ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ವಿವರವಾದ ಮಾಹಿತಿಯನ್ನು ಸಲ್ಲಿಸಲು ಸೂಚಿಸಿದರು.

ಅದರಂತೆ ಹಾಜರಿದ್ದ ಎಲ್ಲಾ ವಲಯಗಳ ಸಹಾಯಕ ನಿರ್ದೇಶಕರು (ನಗರ ಯೋಜನೆ) ರವರುಗಳು ಕೆಲವೊಂದು ಆಕ್ಷೇಪಣಾ ಮೊತ್ತಕ್ಕೆ ವರದಿಯನ್ನು ಸಲ್ಲಿಸಿದ್ದು, ವಸೂಲಾತಿ ಮೊತ್ತಕ್ಕೆ ಸಂಬಂಧಿಸಿದಂತೆ ಸಂಬಂಧಪಟ್ಟವರಿಗೆ ಈಗಾಗಲೇ ನೋಟೀಸ್ ಜಾರಿ ಮಾಡಿರುವುದಾಗಿ ತಿಳಿಸಿದರು. ವಸೂಲಾತಿ ಮೊತ್ತದಲ್ಲಿ ಹೆಚ್ಚಾಗಿ ಕಾರ್ಮಿಕರ ಕಲ್ಯಾಣ ನಿಧಿಗೆ ಸಂಬಂಧಪಟ್ಟಂತೆ ಬಾಕಿ ಇರುವುದಾಗಿ ತಿಳಿಸುತ್ತಾ ಇನ್ನುಳಿಕೆ ಆಕ್ಷೇಪಣೆ ಮೊತ್ತ ಮತ್ತು ವಸೂಲಾತಿ ಮೊತ್ತ ಸಂಗ್ರಹಿಸುವ ಕಾರ್ಯವು ಪ್ರಗತಿಯಲ್ಲಿದೆ ಎಂದು ಸಭೆಗೆ ತಿಳಿಸಿದರು.

ನಂತರ ಎಲ್ಲಾ ವಲಯಗಳ ಸಹಾಯಕ ನಿರ್ದೇಶಕರ ಕಛೇರಿಗಳಲ್ಲಿನ ಲೆಕ್ಕಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ ಹಾಗೂ ವಸೂಲಾತಿ ಮೊತ್ತದ ಅಂಕಿಅಂಶಗಳನ್ನು ಪರಿಶೀಲಿಸಲಾಗಿ ಆಡಿಟ್ ಸೆಲ್ ಅಧಿಕಾರಿಗಳು ನೀಡಿರುವ ಅಂಕಿಅಂಶಗಳ ಪಟ್ಟಿಗೂ ಸಹಾಯಕ ನಿರ್ದೇಶಕರ ಕಛೇರಿಗಳಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತದ ಅಂಕಿಅಂಶಗಳ ಪಟ್ಟಿಗೂ ಬಹಳಷ್ಟು ವ್ಯತ್ಯಾಸಗಳು ಕಂಡುಬರುತ್ತಿದ್ದು, ಈ ಬಗ್ಗೆ ಸಂಬಂದಪಟ್ಟ ಅಧಿಕಾರಿಗಳು ಆಡಿಟ್ ಸೆಲ್ ವಿಭಾಗದವರನ್ನು ಭೇಟಿ ಮಾಡಿ ಪರಿಶೀಲಿಸಿ ವಿವರವಾದ ವರದಿಯನ್ನು ಸಮಿತಿಗೆ ಸಲ್ಲಿಸಲು ಹಾಗೂ ಕಾರ್ಮಿಕರ ಕಲ್ಯಾಣ ನಿಧಿಗೆ ಸಂಬಂಧಪಟ್ಟಂತೆ ಮೊತ್ತವನ್ನು ವಸೂಲು ಮಾಡಿ ಸಂಬಂಧಪಟ್ಟ ಇಲಾಖೆಗೆ ಪಾವತಿಸಲು ಕ್ರಮ ಕೈಗೊಳ್ಳಲು ಸೂಚಿಸಿದರು.

ನಂತರ ಅಧ್ಯಕ್ಷರು ಹಾಜರಿದ್ದ ಸಹಾಯಕ ನಿರ್ದೇಶಕರುಗಳಿಗೆ ತಮ್ಮ ತಮ್ಮ ಕಛೇರಿಗಳಲ್ಲಿ ವಸೂಲು ಮಾಡುವ ವಿವಿಧ ರೀತಿಯ ಶುಲ್ಕವನ್ನು ಯಾವ ಬ್ಯಾಂಕ್‌ಗೆ ಜಮಾ ಮಾಡಲಾಗುತ್ತಿರುತ್ತದೆ. ಬ್ಯಾಂಕ್ ಖಾತೆಯ ವಿವರವನ್ನು ಒದಗಿಸಲು ಸೂಚಿಸಿದಾಗ, ಕೆನರಾ ಬ್ಯಾಂಕ್, ಬಿಬಿಎಂಪಿ ಶಾಖೆಯಲ್ಲಿ ಖಾತೆ ಇದ್ದು, ಎಲ್ಲಾ ವ್ಯವಹಾರಗಳನ್ನು ಸದರಿ ಬ್ಯಾಂಕ್‌ನಲ್ಲಿ ನಡೆಸುತ್ತಿರುವುದಾಗಿ ತಿಳಿಸಿದರು. ಆಗ ಅಧ್ಯಕ್ಷರು ಬ್ಯಾಂಕ್ ಪಾಸ್‌ಶೀಟ್ ವಿವರಗಳನ್ನು ಸಮಿತಿಗೆ ಮೂರು ದಿನಗಳ ಒಳಗೆ ಸಲ್ಲಿಸಲು ಸೂಚಿಸಿದರು.

ತದನಂತರ ಸದಸ್ಯರಾದ ಶ್ರೀ ಎಂ.ಗೌತಮ್ ಕುಮಾರ್ ರವರು ಮಾತನಾಡುತ್ತಾ ಹಾಜರಿದ್ದ ಸಹಾಯಕ ನಿರ್ದೇಶಕರು ನಗರ ಯೋಜನೆ ರವರುಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಕಟ್ಟಡಗಳಿಗೆ ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ, ಇದಕ್ಕೆ ಸಂಬಂಧಿಸಿದಂತೆ ವಸೂಲಾಗಿರುವ ಶುಲ್ಕ, ನಕ್ಷೆ ಉಲ್ಲಂಘನೆ ಮಾಡಿ ನಿರ್ಮಾಣ ಮಾಡಿರುವ ಕಟ್ಟಡಗಳಿಗೆ ದಂಡ ವಿಧಿಸಿರುವ ವಿವರ, ಬಿ ಖಾತಾ ಸ್ವತ್ತುಗಳಿಗೆ ನಕ್ಷೆ

ಮಂಜೂರಾತಿ ನೀಡುತ್ತಿರುವುದು ತಿಳಿದುಬಂದಿದ್ದು, ಸಂಬಂಧಪಟ್ಟಂತೆ ವಿವರಗಳನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ನಂತರ ಅಭಿವೃದ್ಧಿ ಶುಲ್ಕಕ್ಕೆ ಸಂಬಂಧಪಟ್ಟಂತೆ ಬಾಕಿ ಇರುವ ಕಡತಗಳ ವಿವರಗಳು, ವಸೂಲಾತಿಗೆ ಬಾಕಿ ಇರುವ ಒಟ್ಟು ಮೊತ್ತ, ಕಳೆದ ಐದು ವರ್ಷಗಳಲ್ಲಿ ಎಷ್ಟು ಸ್ವಾಧೀನ ಪ್ರಮಾಣ ಪತ್ರ ಮತ್ತು ಪ್ರಾರಂಭಿಕ ಪ್ರಮಾಣ ಪತ್ರಗಳನ್ನು ನೀಡಲಾಗಿರುತ್ತದೆ, ಒಟ್ಟು ಎಷ್ಟು ಕಡತಗಳು ನಾಪತೆಯಾಗಿರುತ್ತದೆ, ಎಷ್ಟು ಎಫ್.ಐ.ಆರ್ ದಾಖಲಾಗಿರುತ್ತದೆ. ಆಯುಕ್ತರವರ ಅನುಮತಿ ಪಡೆದು ಎಷ್ಟು ಕಡತಗಳಿಗೆ ಅನುಮೋದನೆ ನೀಡಲಾಗಿರುತ್ತದೆ. ಮೇಲ್ಕಂಡ ಎಲ್ಲಾ ಮಾಹಿತಿಗಳ ಅಂಕಿಅಂಶಗಳನ್ನು ಸಮಿತಿಗೆ 03 ದಿನಗಳೊಳಗೆ ಸಲ್ಲಿಸಲು ಸೂಚಿಸುತ್ತಾ ನಕ್ಷೆ ಮಂಜೂರಾತಿಯನ್ನು ನೀಡುವ ಮುನ್ನ ಸಿಡಿಪಿ ಯನ್ನು ಪರಿಶೀಲಿಸಿ ನಕ್ಷೆ ಮಂಜೂರಾತಿಯನ್ನು ನೀಡಬೇಕೆಂದು ತಿಳಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು 03 ದಿನಗಳ ಒಳಗೆ ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಸಮಿತಿಯು ತಮ್ಮ ಕಛೇರಿಗೆ ಭೇಟಿ ನೀಡಿ ತಪಾಸಣೆ ಕೈಗೊಳ್ಳುವ ಸಂದರ್ಭದಲ್ಲಿ ಯಾವುದೇ ರೀತಿಯ ಲೋಪ ದೋಷಗಳು ಇಲ್ಲದಂತೆ ಎಲ್ಲಾ ಕಡತಗಳನ್ನು ನಿರ್ವಹಿಸಿರಲು ಸೂಚಿಸುತ್ತಾ ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಿದರು.

**ಅಧ್ಯಕ್ಷರು**
**ಲೆಕ್ಕಪತ್ರ ಸ್ಥಾಯಿ ಸಮಿತಿ**

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಎಲ್ಲಾ ವಲಯ ಸಹಾಯಕ ನಿರ್ದೇಶಕರು ನಗರ ಯೋಜನೆ ರವರುಗಳಿಗೆ ಕಳುಹಿಸುತ್ತಾ ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ
6.ಮುಖ್ಯ ಲೆಕ್ಕಾಧಿಕಾರಿಯವರ ಮಾಹಿತಿಗಾಗಿ
7.ಕಛೇರಿ ಕಡತಕ್ಕೆ.

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 31-01-2017 ರಂದು ಸಂಜೆ 4.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಮುಖ್ಯ ಅಭಿಯಂತರರು(ಕೆರೆಗಳು) |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | ಕಾ.ಪಾ.ಅ.(ಕೆರೆಗಳು) |
| 3. | ಎನ್.ಉಮಾ | – ಸದಸ್ಯರು | ಡಿ.ಸಿ.ಎಫ್ (ಕೆರೆಗಳು) |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | ಎ.ಸಿ.ಆಡಿಟ್ ಸೆಲ್ |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | |
| 6. | ವಿ.ಸುರೇಶ್ | – ಸದಸ್ಯರು | |
| 7. | ಹೆಚ್.ಕುಸುಮಾ | – ಸದಸ್ಯರು | |
| 8. | ಎಂ.ಮಾಲತಿ | – ಸದಸ್ಯರು | |
| 9. | ಎಂ.ಶಾಮಲ | – ಸದಸ್ಯರು | |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಲೆಕ್ಕ ಪತ್ರ ಸ್ಥಾಯಿ ಸಮಿತಿಯ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳನ್ನು ಸ್ವಾಗತ್ತಿಸುತ್ತಾ, ತಮ್ಮ ತಮ್ಮ ಪರಿಚಯ ಮಾಡಿಕೊಳ್ಳಲು ಕೋರಿದರು. ತತ್ಸಂಬಂಧವಾಗಿ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ತಮ್ಮ ತಮ್ಮ ಪರಿಚಯವನ್ನು ಮಾಡಿಕೊಂಡರು.

ಮೊದಲಿಗೆ ಅಧ್ಯಕ್ಷರು ಮಾತನಾಡುತ್ತಾ, ಮುಖ್ಯ ಅಭಿಯಂತರರು (ಕೆರೆಗಳು) ರವರಿಗೆ ತಮ್ಮ ಕಛೇರಿಗೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ 2013-14ನೇ ಸಾಲಿನವರೆಗೆ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಹಾಗೂ ಸದರಿ ಸಾಲುಗಳಿಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ವಿವರವಾದ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ಅದರಂತೆ ಹಾಜರಿದ್ದ ಮುಖ್ಯ ಅಭಿಯಂತರರು (ಕೆರೆಗಳು) ರವರು ಅವರ ಕಛೇರಿಯ ಲೆಕ್ಕ ಪರಿಶೋಧನಾ ವರದಿಗೆ ಸಂಬಂಧಪಟ್ಟಂತೆ ಬಾಕಿ ಇರುವ ಕಂಡಿಕೆ, ಆಕ್ಷೇಪಣೆ ಹಾಗೂ ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಲು ಈಗಾಗಲೇ ಅಗತ್ಯ ಕ್ರಮಗಳನ್ನು ಕೈಗೊಂಡಿರುವುದಾಗಿ ತಿಳಿಸಿದರು.

ನಂತರ ಸದಸ್ಯರಾದ ಶ್ರೀಯುತ ಗೌತಮ್‌ಕುಮಾರ್ ರವರು ಮುಖ್ಯ ಅಭಿಯಂತರರು (ಕೆರೆಗಳು) ರವರಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಒಟ್ಟು ಕೆರೆಗಳ ವಿವರ, ಅಭಿವೃದ್ಧಿಗೊಳಿಸಿರುವ ಕೆರೆಗಳ ವಿವರಗಳನ್ನು ನೀಡಲು ತಿಳಿಸಿದಾಗ, ಸದರಿಯವರು ಪಾಲಿಕೆ ವ್ಯಾಪಿಯಲ್ಲಿ ಒಟ್ಟು 90 ಕೆರೆಗಳಿದ್ದು, 56 ಕೆರೆಗಳನ್ನು ಈಗಾಗಲೇ ಅಭಿವೃದ್ಧಿಪಡಿಸಲಾಗಿರುತ್ತದೆಂದು, 34 ಕೆರೆಗಳನ್ನು ಅಭಿವೃದ್ಧಿಪಡಿಸಬೇಕಾಗಿರುತ್ತದೆಂದು ಮಾಹಿತಿ ನೀಡಿದರು. ನಂತರ ಪ್ರಸ್ತುತ ಯಾವ ಯಾವ ಕೆರೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಅವುಗಳ ಸಂಪೂರ್ಣ ವಿವರಗಳನ್ನು ಅಂದಾಜುಪಟ್ಟಿಯೊಂದಿಗೆ ಸಮಿತಿಗೆ ಸಲ್ಲಿಸಲು ತಿಳಿಸಿದರು.

ಮುಂದುವರಿದು ಅಧ್ಯಕ್ಷರು ಮಾತನಾಡುತ್ತಾ ಈಗಾಗಲೇ ಅಭಿವೃದ್ಧಿಪಡಿಸಿರುವ ಕೆರೆಗಳ ನಿರ್ವಹಣೆಯನ್ನು ಯಾವ ರೀತಿ ಮಾಡಲಾಗುತ್ತಿದೆ ಈ ಬಗ್ಗೆ ವಿವರಗಳನ್ನು ಒದಗಿಸಲು ತಿಳಿಸಿದಾಗ, ಈಗಾಗಲೇ ಅಭಿವೃದ್ಧಿಪಡಿಸಿರುವ ಕೆರೆಗಳನ್ನು ಮೇಲ್ವಿಚಾರಣೆಯನ್ನು ನೋಡಿಕೊಳ್ಳಲು ಸೆಕ್ಯೂರಿಟಿ ಗಾರ್ಡ್‌ಗಳನ್ನು ಎರಡು ಪಾಳಯಗಳಲ್ಲಿ ನಿಯೋಜಿಸಲಾಗಿರುತ್ತದೆಂದು ಉಳಿದಂತೆ ಕೆರೆಯ ಮತ್ತು ಕೆರೆಯ ಸುತ್ತಮುತ್ತಲಿನ ಸ್ವಚ್ಛತೆಯನ್ನು ನಿರ್ವಹಿಸುತ್ತಿರುವುದಾಗಿ ತಿಳಿಸಿದರು. ಇದಕ್ಕೆ ವರ್ಷಕ್ಕೆ ಸುಮಾರು ರೂ.5.00ಕೋಟಿಗಳನ್ನು ವೆಚ್ಚ ಮಾಡುತ್ತಿರುವುದಾಗಿ ತಿಳಿಸಿದರು. ಅಲ್ಲದೆ 18 ಕೆರೆಗಳನ್ನು, ಸ್ಥಳೀಯ ಎನ್.ಜಿ.ಓ ಗಳು ಮತ್ತು ಸಂಘ ಸಂಸ್ಥೆಗಳು ನಿರ್ವಹಣೆ ಮಾಡುತ್ತಿರುವುದಾಗಿ ತಿಳಿಸಿದರು.

ನಂತರ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ಕೆರೆಗಳ ಒತ್ತುವರಿ ತೆರವಿಗೆ ಸಂಬಂಧಿಸಿದಂತೆ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ಈ ಬಗ್ಗೆ ಮಾಹಿತಿಯನ್ನು ನೀಡಲು ಸೂಚಿಸಿದಾಗ, ಹಾಜರಿದ್ದ ಮುಖ್ಯ ಅಭಿಯಂತರರು (ಕೆರೆಗಳು) ರವರು ಸರ್ಕಾರದ ಮಟ್ಟದಲ್ಲಿ ಈಗಾಗಲೇ ಕೆರೆ ಒತ್ತುವರಿ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಒಟ್ಟು 210 ಕೆರೆಗಳ ಸರ್ವೇ ಮಾಡಿ ವರದಿಯನ್ನು ನೀಡಿರುವುದಾಗಿ ಎಲ್ಲಾ ಕೆರೆಗಳು ಕಂದಾಯ ಇಲಾಖೆಯ ಸುಪರ್ದಿನಲ್ಲಿರುವುದಾಗಿ ತಿಳಿಸುತ್ತಾ 2015ರಲ್ಲಿ ಕಂದಾಯ ಇಲಾಖೆಯ ತಹಶೀಲ್ದಾರ್, ಎ.ಡಿ.ಎಲ್.ಆರ್ ಹಾಗೂ ಸರ್ವೇಯರ್‌ಗಳು ಕೆರೆಗಳ ಸರ್ವೇ ಮಾಡಿ

ವಿವರವಾದ ವರದಿಯನ್ನು ಸದನ ಸಮಿತಿಗೆ ಕಳುಹಿಸಿರುತ್ತಾರೆಂದು ಮಾಹಿತಿ ನೀಡಿದರು. ನಂತರ ಕೆರೆಗಳ ಒತ್ತುವರಿಯ ಸಂಪೂರ್ಣ ವಿವರಗಳನ್ನು ಸಮಿತಿಗೆ ಸಲ್ಲಿಸಲು ಸದಸ್ಯರು ಸೂಚಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು 03 ದಿನಗಳ ಒಳಗೆ ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಸಮಿತಿಯು ತಮ್ಮ ಕಛೇರಿಗೆ ಭೇಟಿ ನೀಡಿ ತಪಾಸಣೆ ಕೈಗೊಳ್ಳುವ ಸಂದರ್ಭದಲ್ಲಿ ಯಾವುದೇ ರೀತಿಯ ಲೋಪ ದೋಷಗಳು ಇಲ್ಲದಂತೆ ಎಲ್ಲಾ ಕಡತಗಳನ್ನು ನಿರ್ವಹಿಸಿರಲು ಸೂಚಿಸುತ್ತಾ ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಿದರು.

**ಅಧ್ಯಕ್ಷರು**
**ಲೆಕ್ಕಪತ್ರ ಸ್ಥಾಯಿ ಸಮಿತಿ**

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಮುಖ್ಯ ಅಭಿಯಂತರರು (ಕೆರೆಗಳು) ರವರಿಗೆ ಕಳುಹಿಸುತ್ತಾ ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ
6.ಮುಖ್ಯ ಲೆಕ್ಕಾಧಿಕಾರಿಯವರಿಗೆ ಮಾಹಿತಿಗಾಗಿ ಕಳುಹಿಸಿದೆ
7.ಕಛೇರಿ ಕಡತಕ್ಕೆ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 31-01-2017 ರಂದು ಬೆಳಿಗ್ಗೆ 11.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | - ಅಧ್ಯಕ್ಷರು | ಎಲ್ಲಾ ವಲಯ ಸಹಾಯಕ ನಿರ್ದೇಶಕರು |
| 2. | ಸವಿತಾ ವಿ.ಕೃಷ್ಣ | - ಸದಸ್ಯರು | (ನಗರ ಯೋಜನೆ) |
| 3. | ಎನ್.ಉಮಾ | - ಸದಸ್ಯರು | ಎ.ಸಿ. ಆಡಿಟ್ ಸೆಲ್ |
| 4. | ರಾಧಮ್ಮ ವೆಂಕಟೇಶ್ | - ಸದಸ್ಯರು | |
| 5. | ಜಿ.ಬಾಲಕೃಷ್ಣನ್ | - ಸದಸ್ಯರು | |
| 6. | ವಿ.ಸುರೇಶ್ | - ಸದಸ್ಯರು | |
| 7. | ಹೆಚ್.ಕುಸುಮಾ | - ಸದಸ್ಯರು | |
| 8. | ಎಂ.ಮಾಲತಿ | - ಸದಸ್ಯರು | |
| 9. | ಎಂ.ಶಾಮಲ | - ಸದಸ್ಯರು | |
| 10. | ಕೆ.ವಿ.ರಾಜೇಂದ್ರಕುಮಾರ್ | - ಸದಸ್ಯರು | |
| 11. | ಎಂ.ಗೌತಮ್ ಕುಮಾರ್ | - ಸದಸ್ಯರು | |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಲೆಕ್ಕ ಪತ್ರ ಸ್ಥಾಯಿ ಸಮಿತಿಯ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಎಲ್ಲಾ ವಲಯದ ಸಹಾಯಕ ನಿರ್ದೇಶಕರು (ನಗರ ಯೋಜನೆ) ರವರನ್ನು ಸ್ವಾಗತ್ತಿಸುತ್ತಾ, ತಮ್ಮ ತಮ್ಮ ಪರಿಚಯ ಮಾಡಿಕೊಳ್ಳಲು ಕೋರಿದರು. ತತ್ಸಂಬಂಧವಾಗಿ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಸಹಾಯಕ ನಿರ್ದೇಶಕರು (ನಗರ ಯೋಜನೆ) ರವರುಗಳು ತಮ್ಮ ತಮ್ಮ ಪರಿಚಯವನ್ನು ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ, ಹಾಜರಿದ್ದ ಎಲ್ಲಾ ವಲಯದ ಸಹಾಯಕ ನಿರ್ದೇಶಕರು (ನಗರ ಯೋಜನೆ)ರವರುಗಳಿಗೆ ತಮ್ಮ ತಮ್ಮ ಕಛೇರಿಗಳಿಗೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ 2013-14ನೇ ಸಾಲಿನವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಹಾಗೂ ಸದರಿ ಸಾಲುಗಳಿಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ

ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ವಿವರವಾದ ಮಾಹಿತಿಯನ್ನು ಸಲ್ಲಿಸಲು ಸೂಚಿಸಿದರು.

ಅದರಂತೆ ಹಾಜರಿದ್ದ ಎಲ್ಲಾ ವಲಯಗಳ ಸಹಾಯಕ ನಿರ್ದೇಶಕರು (ನಗರ ಯೋಜನೆ) ರವರುಗಳು ಕೆಲವೊಂದು ಆಕ್ಷೇಪಣಾ ಮೊತ್ತಕ್ಕೆ ವರದಿಯನ್ನು ಸಲ್ಲಿಸಿದ್ದು, ವಸೂಲಾತಿ ಮೊತ್ತಕ್ಕೆ ಸಂಬಂಧಿಸಿದಂತೆ ಸಂಬಂಧಪಟ್ಟವರಿಗೆ ಈಗಾಗಲೇ ನೋಟೀಸ್ ಜಾರಿ ಮಾಡಿರುವುದಾಗಿ ತಿಳಿಸಿದರು. ವಸೂಲಾತಿ ಮೊತ್ತದಲ್ಲಿ ಹೆಚ್ಚಾಗಿ ಕಾರ್ಮಿಕರ ಕಲ್ಯಾಣ ನಿಧಿಗೆ ಸಂಬಂಧಪಟ್ಟಂತೆ ಬಾಕಿ ಇರುವುದಾಗಿ ತಿಳಿಸುತ್ತಾ ಇನ್ನುಳಿಕೆ ಆಕ್ಷೇಪಣೆ ಮೊತ್ತ ಮತ್ತು ವಸೂಲಾತಿ ಮೊತ್ತ ಸಂಗ್ರಹಿಸುವ ಕಾರ್ಯವು ಪ್ರಗತಿಯಲ್ಲಿದೆ ಎಂದು ಸಭೆಗೆ ತಿಳಿಸಿದರು.

ನಂತರ ಎಲ್ಲಾ ವಲಯಗಳ ಸಹಾಯಕ ನಿರ್ದೇಶಕರ ಕಛೇರಿಗಳಲ್ಲಿನ ಲೆಕ್ಕಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ ಹಾಗೂ ವಸೂಲಾತಿ ಮೊತ್ತದ ಅಂಕಿಅಂಶಗಳನ್ನು ಪರಿಶೀಲಿಸಲಾಗಿ ಆಡಿಟ್ ಸೆಲ್ ಅಧಿಕಾರಿಗಳು ನೀಡಿರುವ ಅಂಕಿಅಂಶಗಳ ಪಟ್ಟಿಗೂ ಸಹಾಯಕ ನಿರ್ದೇಶಕರ ಕಛೇರಿಗಳಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತದ ಅಂಕಿಅಂಶಗಳ ಪಟ್ಟಿಗೂ ಬಹಳಷ್ಟು ವ್ಯತ್ಯಾಸಗಳು ಕಂಡುಬರುತ್ತಿದ್ದು, ಈ ಬಗ್ಗೆ ಸಂಬಂದಪಟ್ಟ ಅಧಿಕಾರಿಗಳು ಆಡಿಟ್ ಸೆಲ್ ವಿಭಾಗದವರನ್ನು ಭೇಟಿ ಮಾಡಿ ಪರಿಶೀಲಿಸಿ ವಿವರವಾದ ವರದಿಯನ್ನು ಸಮಿತಿಗೆ ಸಲ್ಲಿಸಲು ಹಾಗೂ ಕಾರ್ಮಿಕರ ಕಲ್ಯಾಣ ನಿಧಿಗೆ ಸಂಬಂಧಪಟ್ಟಂತೆ ಮೊತ್ತವನ್ನು ವಸೂಲು ಮಾಡಿ ಸಂಬಂಧಪಟ್ಟ ಇಲಾಖೆಗೆ ಪಾವತಿಸಲು ಕ್ರಮ ಕೈಗೊಳ್ಳಲು ಸೂಚಿಸಿದರು.

ನಂತರ ಅಧ್ಯಕ್ಷರು ಹಾಜರಿದ್ದ ಸಹಾಯಕ ನಿರ್ದೇಶಕರುಗಳಿಗೆ ತಮ್ಮ ತಮ್ಮ ಕಛೇರಿಗಳಲ್ಲಿ ವಸೂಲು ಮಾಡುವ ವಿವಿಧ ರೀತಿಯ ಶುಲ್ಕವನ್ನು ಯಾವ ಬ್ಯಾಂಕ್‌ಗೆ ಜಮಾ ಮಾಡಲಾಗುತ್ತಿರುತ್ತದೆ. ಬ್ಯಾಂಕ್ ಖಾತೆಯ ವಿವರವನ್ನು ಒದಗಿಸಲು ಸೂಚಿಸಿದಾಗ, ಕೆನರಾ ಬ್ಯಾಂಕ್, ಬಿಬಿಎಂಪಿ ಶಾಖೆಯಲ್ಲಿ ಖಾತೆ ಇದ್ದು, ಎಲ್ಲಾ ವ್ಯವಹಾರಗಳನ್ನು ಸದರಿ ಬ್ಯಾಂಕ್‌ನಲ್ಲಿ ನಡೆಸುತ್ತಿರುವುದಾಗಿ ತಿಳಿಸಿದರು. ಆಗ ಅಧ್ಯಕ್ಷರು ಬ್ಯಾಂಕ್ ಪಾಸ್‌ಶೀಟ್ ವಿವರಗಳನ್ನು ಸಮಿತಿಗೆ ಮೂರು ದಿನಗಳ ಒಳಗೆ ಸಲ್ಲಿಸಲು ಸೂಚಿಸಿದರು.

ತದನಂತರ ಸದಸ್ಯರಾದ ಶ್ರೀ ಎಂ.ಗೌತಮ್ ಕುಮಾರ್ ರವರು ಮಾತನಾಡುತ್ತಾ ಹಾಜರಿದ್ದ ಸಹಾಯಕ ನಿರ್ದೇಶಕರು ನಗರ ಯೋಜನೆ ರವರುಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಕಟ್ಟಡಗಳಿಗೆ ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ, ಇದಕ್ಕೆ ಸಂಬಂಧಿಸಿದಂತೆ ವಸೂಲಾಗಿರುವ ಶುಲ್ಕ, ನಕ್ಷೆ ಉಲ್ಲಂಘನೆ ಮಾಡಿ ನಿರ್ಮಾಣ ಮಾಡಿರುವ ಕಟ್ಟಡಗಳಿಗೆ ದಂಡ ವಿಧಿಸಿರುವ ವಿವರ, ಬಿ ಖಾತಾ ಸ್ವತ್ತುಗಳಿಗೆ ನಕ್ಷೆ

ಮಂಜೂರಾತಿ ನೀಡುತ್ತಿರುವುದು ತಿಳಿದುಬಂದಿದ್ದು, ಸಂಬಂಧಪಟ್ಟಂತೆ ವಿವರಗಳನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ನಂತರ ಅಭಿವೃದ್ಧಿ ಶುಲ್ಕಕ್ಕೆ ಸಂಬಂಧಪಟ್ಟಂತೆ ಬಾಕಿ ಇರುವ ಕಡತಗಳ ವಿವರಗಳು, ವಸೂಲಾತಿಗೆ ಬಾಕಿ ಇರುವ ಒಟ್ಟು ಮೊತ್ತ, ಕಳೆದ ಐದು ವರ್ಷಗಳಲ್ಲಿ ಎಷ್ಟು ಸ್ವಾಧೀನ ಪ್ರಮಾಣ ಪತ್ರ ಮತ್ತು ಪ್ರಾರಂಭಿಕ ಪ್ರಮಾಣ ಪತ್ರಗಳನ್ನು ನೀಡಲಾಗಿರುತ್ತದೆ, ಒಟ್ಟು ಎಷ್ಟು ಕಡತಗಳು ನಾಪತೆಯಾಗಿರುತ್ತದೆ, ಎಷ್ಟು ಎಫ್.ಐ.ಆರ್ ದಾಖಲಾಗಿರುತ್ತದೆ. ಆಯುಕ್ತರವರ ಅನುಮತಿ ಪಡೆದು ಎಷ್ಟು ಕಡತಗಳಿಗೆ ಅನುಮೋದನೆ ನೀಡಲಾಗಿರುತ್ತದೆ. ಮೇಲ್ಕಂಡ ಎಲ್ಲಾ ಮಾಹಿತಿಗಳ ಅಂಕಿಅಂಶಗಳನ್ನು ಸಮಿತಿಗೆ 03 ದಿನಗಳೊಳಗೆ ಸಲ್ಲಿಸಲು ಸೂಚಿಸುತ್ತಾ ನಕ್ಷೆ ಮಂಜೂರಾತಿಯನ್ನು ನೀಡುವ ಮುನ್ನ ಸಿಡಿಪಿ ಯನ್ನು ಪರಿಶೀಲಿಸಿ ನಕ್ಷೆ ಮಂಜೂರಾತಿಯನ್ನು ನೀಡಬೇಕೆಂದು ತಿಳಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು 03 ದಿನಗಳ ಒಳಗೆ ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಸಮಿತಿಯು ತಮ್ಮ ಕಛೇರಿಗೆ ಭೇಟಿ ನೀಡಿ ತಪಾಸಣೆ ಕೈಗೊಳ್ಳುವ ಸಂದರ್ಭದಲ್ಲಿ ಯಾವುದೇ ರೀತಿಯ ಲೋಪ ದೋಷಗಳು ಇಲ್ಲದಂತೆ ಎಲ್ಲಾ ಕಡತಗಳನ್ನು ನಿರ್ವಹಿಸಿರಲು ಸೂಚಿಸುತ್ತಾ ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಿದರು.

**ಅಧ್ಯಕ್ಷರು**
**ಲೆಕ್ಕಪತ್ರ ಸ್ಥಾಯಿ ಸಮಿತಿ**

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಎಲ್ಲಾ ವಲಯ ಸಹಾಯಕ ನಿರ್ದೇಶಕರು ನಗರ ಯೋಜನೆ ರವರುಗಳಿಗೆ ಕಳುಹಿಸುತ್ತಾ ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ
6.ಮುಖ್ಯ ಲೆಕ್ಕಾಧಿಕಾರಿಯವರ ಮಾಹಿತಿಗಾಗಿ
7.ಕಛೇರಿ ಕಡತಕ್ಕೆ